ಗುಲ್ಬರ್ಗ ಜಿಲ್ಲೆಯಲ್ಲಿ ಮೃತಪಟ್ಟ ಕುಟುಂಬಗಳಿಗೆ ಹಾಗೂ ಗಾಯಾಳುಗಳಿಗೆ ಪರಿಹಾರ ನೀಡುವುದು

1723. ಶ್ರೀ ಜಿ. ರಾಮಕೃಷ್ಣ (ಕಮಲಾಪುರ) : ಮಾನ್ಯ ಗೃಹ ಮತ್ತು ಅಬ್ಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಿನಾಂಕ 7-7-1991 ರಂದು ಕಮಲಾಪುರದಲ್ಲಿ ಬರುವ ಕುದಮೂಡ. ಓಕಳಿ ಹಾಗೂ ಸಿರಸಗಿ ಗ್ರಾಮಗಳ ಪರಿಶಿಷ್ಟ ವರ್ಗದ ಜನರು ಟ್ರ್ಯಾಕ್ಟರ್‌ನಲ್ಲಿ ದನ್ನೂರು ಗ್ರಾಮಕ್ಕೆ ಶವಸಂಸ್ಕಾರಕ್ಕೆ ಹೋಗಿ ಹಿಂದಿರುಗುವಾಗ ಟ್ರ್ಯಾಕ್ಟರ್ ಮುಗುಚಿ ಬಿದ್ದು ಏಳು ಜನ ಸ್ಥಳದಲ್ಲೇ ಮೃತಪಟ್ಟು 37 ಜನರು ಮರಣಾಂತಿಕ ಗಾಯಗೊಂಡು ಗುಲ್ಬರ್ಗಾ ಆಸ್ಪತ್ರೆಗೆ ದಾಖಲಾಗಿದ್ದುದು ನಿಜವೇ;

ಆ) ಗುಲ್ಬರ್ಗಾ ಜಿಲ್ಲಾಧಿಕಾರಿಯವರು ಸ್ಥಳ ಪರಿಶೀಲನೆ ನಡೆಸಿ ಮೃತರಾದ ಕುಟುಂಬದವರಿಗೆ ಹಾಗೂ ಗಾಯಾಳುಗಳಿಗೆ ಪರಿಹಾರ ಧನ ನೀಡಬೇಕೆಂದು ಸರ್ಕಾರಕ್ಕೆ 1991 ರಲ್ಲಿ ಶಿಫಾರಸ್ಸು ಮಾಡಿದ್ದು ನಿಜವಲ್ಲವೇ;

ಇ) ಹಾಗಿದ್ದಲ್ಲಿ. ಈವರೆಗೆ ಸದರಿ ಪರಿಹಾರ ಧನವನ್ನು ಸಂಬಂಧಪಟ್ಟವರಿಗೆ ನೀಡದಿರುವುದಕ್ಕೆ ಕಾರಣವೇನು;

ಈ) ಸಂಬಂಧಪಟ್ಟವರಿಗೆ ಪರಿಹಾರ ಧನ ಯಾವಾಗ ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಗೃಹ ಮತ್ತು ಅಬ್ಕಾರಿ ಸಚಿವರು) :

ಅ) ಟ್ರ್ಯಾಕ್ಟರ್ ಅಪಘಾತವು ಸಂಭವಿಸಿದ್ದು ದಿನಾಂಕ 27-6-1991 ರಂದು. 7-7-1991 ರಂದು ಅಲ್ಲ.

ಆ ಘಟನೆಯಲ್ಲಿ 7 ಜನರು ಸ್ಥಳದಲ್ಲಿಯೇ ಮೃತಪಟ್ಟಿದ್ದು. ಇಬ್ಬರು ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. 37 ಜನರು ಗಾಯಗೊಂಡಿದ್ದಾರೆ ಹಾಗೂ ಇವರನ್ನು ಗುಲ್ಬರ್ಗಾ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು.

ಆ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಧನ ಸಹಾಯ ನೀಡಲು ಶಿಫಾರಸ್ಸು ಮಾಡಿದ್ದಾರೆ.

ಇ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಲ್ಲಿ ಹಣವಿಲ್ಲದಿದ್ದುದರಿಂದ ಪರಿಹಾರವನ್ನು ಕೂಡಲೇ ನೀಡಲು ಸಾಧ್ಯವಾಗಿಲ್ಲ.

ಈ) ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ ತಲಾ ರೂ. 1.000-00 ನಂತೆ ಧನ ಸಹಾಯ ನೀಡಲು ಗುಲ್ಬರ್ಗಾ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.